ಅಪರಾಧಿಗೆ ಕಠಿಣ ಶಿಕ್ಷೆಯಾಗಲಿ : ಮೃಣಾಲ ಹೆಬ್ಬಾಳಕರ್

ಬೆಳಗಾವಿ: ಹುಬ್ಬಳ್ಳಿಯ ಕಾಲೇಜು ವಿದ್ಯಾರ್ಥಿನಿ, ಸಹೋದರಿ ನೇಹಾ ಹಿರೇಮಠ ಅವರ ಕೊಲೆ ಘಟನೆ ಅತ್ಯಂತ ದುರ್ದೈವದ ಸಂಗತಿ, ಅತ್ಯಂತ

ಖಟು ಶಬ್ದಗಳಿಂದ ನಾನು ಖಂಡಿಸುತ್ತೇನೆ. ಕೃತ್ಯ ಎಸಗಿದ ವ್ಯಕ್ತಿಗೆ ಅತ್ಯಂತ ಕಠಿಣ ಶಿಕ್ಷೆಯಾಗಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಆಗ್ರಹಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ನೇಹಾ ಹಿರೇಮಠ ಕುಟುಂಬದ ದುಃಖದಲ್ಲಿ ನಾನು ಕೂಡ ಭಾಗಿಯಾಗಿದ್ದೇನೆ. ನನ್ನ ತಾಯಿ ಲಕ್ಷ್ಮೀ ಹೆಬ್ಬಾಳಕರ್ ಅವರು ನನ್ನೆ ಅವರ ಮನೆಗೆ ಹೋಗಿ ಸಾಂತ್ವನ ಹೇಳಿ ಬಂದಿದ್ದಾರೆ, ಧೈರ್ಯ ಹೇಳಿ ಬಂದಿದ್ದಾರೆ. ಇಂತಹ ಘಟನೆ ಎಲ್ಲೂ ನಡೆಯಬಾರದು. ಅಪರಾಧಿಗೆ ಕಠಿಣ ಶಿಕ್ಷೆಯಾಗಬೇಕು, ಮುಂದೆ ಇಂತಹ ಕೃತ್ಯಕ್ಕೆ ಯಾರೂ ಕೈಹಾಕಬಾರದು ಅಂತಹ ಶಿಕ್ಷೆ ಆತನಿಗೆ ಆಗಬೇಕು ಎಂದು ಮೃಣಾಲ ಹೇಳಿದ್ದಾರೆ.

ನಾವೆಲ್ಲ ನೊಂದ ಕುಟುಂಬದ ಜೊತೆಗಿದ್ದೇವೆ. ಆದರೆ ಯಾರೂ ಈ ಘಟನೆಯನ್ನು ರಾಜಕೀಯಕ್ಕೆ ಬಳಸಿಕೊಳ್ಳಬಾರದೆಂದು ವಿನಂತಿಸುತ್ತೇನೆ ಎಂದು ಮೃಣಾಲ್ ಹೆಬ್ಬಾಳಕರ್ ಮನವಿ ಮಾಡಿದ್ದಾರೆ.

ಮೆಹಂದಿ ಮೂಲಕ ಮತದಾನ ಜಾಗೃತಿ

ಹುಕ್ಕೇರಿ;–ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ, ಎಫ್ ವಿ ಟಿ ಆರ್ ಎಸ್ ಸಂಸ್ಥೆ, ಬೆಂಗಳೂರು ಹಾಗೂ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರ ಯಲ್ಲಾಪೂರ–ಕರಗುಪ್ಪಿ ಇವರ ಸಹಯೋಗದಲ್ಲಿ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರದಲ್ಲಿ ಮೆಹಂದಿ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಿಳಾ ಕಲ್ಯಾಣ ಸಂಸ್ಥೆಯ ಗೌರವ ಕಾರ್ಯದರ್ಶಿ ವೈಜಯಂತಿ ಚೌಗಲಾ ಮಾತನಾಡಿ ಕಡ್ಡಾಯವಾಗಿ ಮತದಾನ ಮಾಡುವುದು ಅವಶ್ಯಕವಾಗಿದೆ ದೇಶದಲ್ಲಿ ಉತ್ತಮ ಆಡಳಿತವನ್ನು ಪಡೆಯಬೇಕಾದರೆ ಪ್ರತಿಯೊಬ್ಬರು ಮತದಾನ ಮಾಡಬೇಕು. ನಾನ ಒಬ್ಬ ಮತದಾನ ಮಾಡದಿದ್ದರೆ ಏನಾಗುತ್ತೆ ಅನ್ನೋ ಮನೋಭಾವ ಬಿಟ್ಟು ನಮ್ಮ ಒಂದು ಮತದಾನದಿಂದ ದೇಶದ ಭವಿಷ್ಯ ನಿರ್ಧಾರವಾಗುತ್ತದೆ ಆದ್ದರಿಂದ ಪ್ರತಿಯೊಬ್ಬರು ಮತದಾನ ಮಾಡಿ ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಎಫ್ ವಿ ಟಿ ಆರ್ ಎಸ್ ಸಂಸ್ಥೆಯ ಕ್ಷೇತ್ರ ಸಂಯೋಜಕ ಬಸವರಾಜ ಮಣ್ಣಿಕೇರಿ ಉಪಸ್ಥಿತರಿದ್ದರು 35 ಕ್ಕೂ ಹೆಚ್ಚಿನ ಮಹಿಳೆಯ ರು ಮೆಹಂದಿ ಮೂಲಕ ಜಾಗೃತಿ ಮೂಡಿಸಿದರು.

ಮಾಧ್ಯಮ ಕಣ್ಗಾವಲು ಘಟಕಕ್ಕೆ ಚುನಾವಣಾ ಸಾಮಾನ್ಯ ವೀಕ್ಷಕ ಎಂ.ಕೆ.ಅರವಿಂದ ಕುಮಾರ್ ಭೇಟಿ

ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ವಹಿಸಲು ಸೂಚನೆ

ಬೆಳಗಾವಿ, ಏ.: ಲೋಕಸಭಾ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಟಿವಿ ಚಾನೆಲ್, ದಿನಪತ್ರಿಕೆಗಳು ಮಾತ್ರವಲ್ಲದೇ ಸಾಮಾಜಿಕ ಜಾಲತಾಣಗಳಲ್ಲಿ ನೀಡುವ ಜಾಹೀರಾತುಗಳು ಮತ್ತು ಪ್ರಚಾರಕಾರ್ಯಗಳ ಖರ್ಚುವೆಚ್ಚದ ಮೇಲೆಯೂ ನಿಗಾ ವಹಿಸಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರಾದ ಹಿರಿಯ ಐ.ಎ.ಎಸ್ ಅಧಿಕಾರಿ ಎಂ.ಕೆ.ಅರವಿಂದ ಕುಮಾರ್ ಅವರು ನಿರ್ದೇಶನ ನೀಡಿದರು.

ಚುನಾವಣೆ ಹಿನ್ನೆಲೆಯಲ್ಲಿ ವಾರ್ತಾಭವನದಲ್ಲಿ ಸ್ಥಾಪಿಸಲಾಗಿರುವ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು(ಎಂಸಿಎಂಸಿ) ಘಟಕಕ್ಕೆ ಭಾನುವಾರ(ಏ.21) ಭೇಟಿ ನೀಡಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಮಾತನಾಡಿದರು.

ಇತ್ತೀಚೆಗೆ ದೇಶದಾದ್ಯಂತ ಸಾಮಾಜಿಕ ಜಾಲತಾಣಗಳ ಬಳಕೆದಾರರ ಮೇಲೆ ಯೂಟ್ಯೂಬರ್ ಗಳ ಪ್ರಭಾವ ಹೆಚ್ಚಾಗಿದ್ದು, ಇಂತಹ ಇನ್ ಫ್ಲುಯೆನ್ಸರ್ ಗಳನ್ನು ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳು ತಮ್ಮ ಚುನಾವಣಾ ಪ್ರಚಾರಕ್ಕೆ ಬಳಸುಕೊಳ್ಳುತ್ತಿದ್ದಾರೆ. ಇಂತಹ ಸ್ಥಳೀಯ ಇನ್

ಫ್ಲುಯೆನ್ಸರ್ ಗಳ ಮೇಲೆ ನಿಗಾ ವಹಿಸಬೇಕು. ಚುನಾವಣಾ ಆಯೋಗದ ಮಾರ್ಗಸೂಚಿಗಳ ಬಗ್ಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಚುನಾವಣಾ ಪ್ರಚಾರದ ಖರ್ಚು–ವೆಚ್ಚಗಳ ಮೇಲೆ ನಿಗಾ ವಹಿಸುವುದರ ಜತೆಗೆ ಮಾದರಿ ನೀತಿಸಂಹಿತೆ ಉಲ್ಲಂಘನೆ ಪ್ರಕರಣಗಳ ಮೇಲೆಯೂ ನಿರಂತರ ನಿಗಾ ವಹಿಸಬೇಕು. ಇಂತಹ ವಿಷಯಗಳ ಬಗ್ಗೆ ಚುನಾವಣಾಧಿಕಾರಿಗಳು ಹಾಗೂ ಸಂಬಂಧಿಸಿದ ನೋಡಲ್ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಎಂ.ಕೆ.ಅರವಿಂದಕುಮಾರ್ ಹೇಳಿದು.

ಸಮೂಹ ಮಾಧ್ಯಮ–ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ:

ಎಲ್ಲ ಟಿವಿ ಚಾನೆಲ್ ಗಳು ಮತ್ತು ಬೆಳಗಾವಿ ಜಿಲ್ಲೆಯಲ್ಲಿರುವ ಕನ್ನಡ, ಇಂಗ್ಲಿಷ್ ಮರಾಠಿ ದಿನಪತ್ರಿಕೆಗಳಲ್ಲಿ ಪ್ರಕಟವಾಗುವ ಚುನಾವಣಾ ಸಂಬಂಧಿತ ಜಾಹೀರಾತು ಹಾಗೂ ಸುದ್ದಿಗಳ ಮೇಲೆ ನಿಗಾವಹಿಸಲಾಗುತ್ತಿದೆ. ನೀತಿಸಂಹಿತೆ ಉಲ್ಲಂಘನೆ ಕಂಡುಬಂದರೆ ತಕ್ಷಣವೇ ಜಿಲ್ಲಾ ಚುನಾವಣಾಧಿಕಾರಿಗಳು, ಎಂಸಿಸಿ ನೋಡಲ್ ಅಧಿಕಾರಿಗಳು ಹಾಗೂ ವೆಚ್ಚ ನೋಡಲ್ ಅಧಿಕಾರಿಗಳ ಗಮನಕ್ಕೆ ತರಲಾಗುತ್ತದೆ ಎಂದು ಎಂಸಿಎಂಸಿ ನೋಡಲ್ ಅಧಿಕಾರಿ ಗುರುನಾಥ ಕಡಬೂರ ವಿವರಿಸಿದರು.

ಇದಲ್ಲದೇ ಪ್ರತ್ಯೇಕ ತಂಡವು ಸಾಮಾಜಿಕ ಜಾಲತಾಣಗಳ ಮೇಲೂ ನಿಗಾ ವಹಿಸಿದ್ದು, ಅಭ್ಯರ್ಥಿಗಳ ಪ್ರಚಾರ ಮತ್ತು ಖರ್ಚುವೆಚ್ಚವನ್ನು ಪರಿಶೀಲಿಸುತ್ತಿದೆ ಎಂದರು.ತಹಶೀಲ್ದಾರರಾದ ಸಿದ್ದರಾಯ ಭೋಸಗಿ, ಮಾಧ್ಯಮ ಘಟಕದ ಉಸ್ತುವಾರಿಗಳಾದ ಶ್ರೀಮತಿ ಝಡ್.ಜಿ.ಸಯ್ಯದ್, ವಿ.ಎಂ.ಕಂಗ್ರಾಳಕರ, ಶ್ರೀಮತಿ ಎಂ.ಎಂ.ಪಾಟೀಲ, ಎಸ್.ಎಸ್.ಘೋರ್ಪಡೆ, ಎ.ಬಿ.ಕಾಮಣ್ಣವರ, ಎಂ.ಪಿ.ನಚ್ಚಣಕಿ, ಮಹಾಂತೇಶ ಪತ್ತಾರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸ್ಟ್ರಾಂಗ್ ರೂಮ್ ಪರಿಶೀಲನೆ:

ಬೆಳಗಾವಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರಾದ ಹಿರಿಯ ಐ.ಎ.ಎಸ್ ಅಧಿಕಾರಿ ಎಂ.ಕೆ.ಅರವಿಂದ ಕುಮಾರ್ ಅವರು, ಇದಕ್ಕೂ ಮುಂಚೆ ಆರ್.ಪಿ.ಡಿ. ಮಹಾವಿದ್ಯಾಲಯದಲ್ಲಿ ಸ್ಥಾಪಿಸಲಾಗಿರುವ ಸ್ಟ್ರಾಂಗ್ ರೂಮ್ ಪರಿಶೀಲಿಸಿದರು.

ಇದಾದ ಬಳಿಕ ವನಿತಾ ಮಹಾವಿದ್ಯಾಲಯದಲ್ಲಿರುವ ಮಸ್ಟರಿಂಗ್–ಡಿಮಸ್ಟರಿಂಗ್ ಕೇಂದ್ರ, ಸ್ಟ್ರಾಂಗ್ ರೂಮ್ ವೀಕ್ಷಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಮೊದಲನೇ ಮಹಡಿಯಲ್ಲಿರುವ ಏಕಗವಾಕ್ಷಿ ಕೇಂದ್ರ ಸುವಿಧಾ ಕೇಂದ್ರಕ್ಕೂ ಭೇಟಿ ನೀಡಿ, ಚುನಾವಣಾ ಪ್ರಚಾರ ಕಾರ್ಯಗಳಿಗೆ ಅನುಮತಿ ನೀಡುವ ಏಕಗವಾಕ್ಷಿ ವ್ಯವಸ್ಥೆಯನ್ನು ಪರಿಶೀಲಿಸಿದರು.

4 ತಿಂಗಳಲ್ಲಿ ಜೈತನಮಾಳ ಸಮಗ್ರ ಅಭಿವೃದ್ಧಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಸಚಿವರಿಂದ ಮತ ಸಂಚಾರ; ಅದ್ಧೂರಿಯಾಗಿ ಸ್ವಾಗತಿಸಿದ ನಾಗರಿಕರು

ಬೆಳಗಾವಿ* ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಜಯ ದಾಖಲಿಸಿದರೆ ಬೈತನಮಾಳವನ್ನು ದತ್ತು ಸ್ವೀಕರಿಸಿ, ಸಮಗ್ರವಾಗಿ ಅಭಿವೃದ್ಧಿ ಮಾಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಜೈತನ್ ಮಾಳದಲ್ಲಿ ಚುನಾವಣಾ ಪ್ರಚಾರ ನಡೆಸಿದ ಸಚಿವರು, ಇಲ್ಲಿರುವ ಅವ್ಯವಸ್ಥೆ ನೋಡಿ ನಿಜಕ್ಕೂ ಬೇಸರ ಉಂಟಾಯಿತು. ಕನಷ್ಠ ಮೂಲಭೂತ ಸೌಕರ್ಯಗಳನ್ನೂ ಒದಗಿಸಲು ಈ ಭಾಗದ ಜನಪ್ರತಿನಿಧಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

ಜೈತನ್ ಮಾಳ ಜನರು ಎದುರಿಸುತ್ತಿರುವ ಮೂಲಭೂತ ಸೌಕರ್ಯಗಳ ಕೊರತೆ ನೋಡಿ ಮರುಕ ಉಂಟಾಯಿತು. ಮೃಣಾಲ್ ಹೆಬ್ಬಾಳ್ಕರ್ ಆರಿಸಿ ಬಂದರೆ ಕೇವಲ ನಾಲ್ಕು ತಿಂಗಳಲ್ಲಿ ಅಭಿವೃದ್ಧಿ ಮಾಡಲಾಗುವುದು. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಅವರನ್ನು ಬೆಂಬಲಿಸಬೇಕು ಎಂದು ಸಚಿವರು ಮನವಿ ಮಾಡಿದರು.

ಜುನೆ ಬೆಳಗಾವಿಯಲ್ಲಿ ಅದ್ದೂರಿ ಸ್ವಾಗತ

ಬಳಿಕ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಜುನೆ (ಹಳೇ) ಬೆಳಗಾವಿಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಚಾರ ನಡೆಸಿದರು. ಸ್ಥಳೀಯ ಮಹಿಳೆಯರು ಆರತಿ ಬೆಳಗಿ ಸಚಿವರನ್ನು ಸ್ವಾಗತಿಸಿದರು. ಹಳೇ ಬೆಳಗಾವಿ ನಾಕಾದಿಂದ ಕಲ್ಲಪ್ಪ ದೇವಸ್ಥಾನದವರೆಗೆ ಸಚಿವರೊಂದಿಗೆ ನೂರಾರು ಮಹಿಳೆಯರು ಹೆಜ್ಜೆ ಹಾಕಿದರು. ಚೌಡಿಗಲ್ಲಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಜೊತೆಗೂಡಿ ಸಚಿವರು ಪ್ರಚಾರ ನಡೆಸಿದರು. ಈ ವೇಳೆ ದೇವದಾಸ್ ಕನ್ನುಕರ್, ಕಾರ್ಪೋರೇಟರ್ ಲಕ್ಷ್ಮೀ ಲೋಖರೆ, ಮಲ್ಲಸರ್ಜ ಪಾಟೀಲ್,ತುಕಾರಾಮ್ ಹೊಸುರಕರ, ನೈ.ವೈ.ಕನ್ನುಕರ್, ಡಾ.ಸುಕೀರ್ತ್ ನಾರಾಯಣ್ ಭಂಡಾರಿ, ಮಾಧುರಿ ಜಾಧವ್, ಮುತ್ತುರಾಜ್, ನಾಗಪ್ಪ, ಯಲ್ಲಪ್ಪ ಗುಜನಾಳ, ಚಂದ್ರು, ಶಬ್ಬೀರ್, ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಇಂದು ಮಲ್ಲಿಕಾರ್ಜುನ ರಥೋತ್ಸವ

ಯರಗಟ್ಟಿ : ಸಮೀಪದ ಸತ್ತಿಗೇರಿ ಭಾಗದ ಆರಾಧ್ಯ ದೈವ

ಮಲ್ಲಿಕಾರ್ಜುನ ರಥೋತ್ಸವ ಇಂದು ವಿಜೃಂಭಣೆಯಿಂದ ಜರುಗಲಿದೆ. ಎರಡನೇ ಶ್ರೀಶೈಲ ಕ್ಷೇತ್ರವೆಂದೇ ಶ್ರೀಮಲ್ಲಿಕಾರ್ಜುನ ದೇವಸ್ಥಾನ ಪ್ರಖ್ಯಾತಿ ಪಡೆದಿದ್ದು, ಈ ಜಾತ್ರಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯಲ್ಲಿ ಭಕ್ತರು ನೆರೆಯುತ್ತಾರೆ. ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಜರುಗುವ ರಥೋತ್ಸವದ ನಮಿತ್ತ ಮಂಗಳವಾರ ನಾನಾ ಧಾರ್ಮಿಕ ವಿಧಿ ವಿಧಾನಗಳು ನಡೆದವು. ಎ23ರಂದು ಬೆಳಗ್ಗೆ ಅಭಿಷೇಕ, ಪೂಜೆ, ಸೇರಿದಂತೆ ಹಲವು ಕಾರ್ಯಕ್ರಮಗಳು ನಡೆಯಲಿವೆ. ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ಪೂಜಾಕಾರ್ಯಗಳು ನೆರವೇರಲಿವೆ. ಎಂದು ದೇವಸ್ಥಾನ ಆಡಳಿತ ಮಂಡಳಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಯರಗಟ್ಟಿ : ಸಮೀಪದ ಮುನವಳ್ಳಿಯಲ್ಲಿ ಭಗವಾನ್ ಮಹಾವೀರರ ಜಯಂತಿ ಉತ್ಸವವನ್ನು ಪಟ್ಟಣದಲ್ಲಿ ಸಂಭ್ರಮದಿಂದ ಆಚರಿಸಲಾಯಿತು. ಎಲ್.ಎಸ್.ಎಂ.ಪಿ. ಮಾಜಿ ಅಧ್ಯಕ್ಷ ಪದ್ಮನಗೌಡ ಪಾಟೀಲ ಭಾವಚಿತ್ರಕ್ಕೆ ಪೂಜೆ ನೆರವೇರಿಸಿದರು. ರಾಣಿ ಚನ್ನಮ್ಮ ಸಹೇಲಿ ಪದಾಧಿಕಾರಿ ಪದ್ಮಾವತಿ ಪಾಟೀಲ, ಅರಿಹಂತ ಕೋ.ಆಪ್.ಸೊಸೈಟಿ ನಿರ್ದೇಶಕ ಮಂಜುನಾಥ ಪಾಟೀಲ, ಬಸವರಾಜ ವಾಳಿ, ಮಹಾಂತೇಶ ನವಲಗುಂದ, ಅರುಣಾ, ಅನಕೇತ, ಗಿರೀಶ, ಪಂಚು ಮೊರಬದ, ಸುಜಾತಾ, ಸೇರಿದಂತೆ ಇತರರು ಇದ್ದರು.

ಭಗವಾನ್ ಮಹಾವೀರ ಜಯಂತಿ : ಜಿಲ್ಲಾಡಳಿತದಿಂದ ಪುಳ್ಳ ನಮನ ಸಲ್ಲಿಕೆ

ಕೊಪ್ಪಳ, ಏಪ್ರಿಲ್ : ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಭಗವಾನ್ ಶ್ರೀ ಮಹಾವೀರ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಆಚರಿಸಲಾಯಿತು. ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಜಯಂತಿಯನ್ನು ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಯಿತು. ಕೊಪ್ಪಳ ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಅವರು ಮಹಾವೀರರ ಭಾವಚಿತ್ರಕ್ಕೆ ಪುಳ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಶ್ರೀಶೈಲ ಬಿರದಾರ, ಕನ್ನಡ ಮತ್ತು ಸಂಸ್ಕೃತಿ

ಇಲಾಖೆ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ಸಮಾಜದ ಮುಖಂಡರಾದ ರಾಜೇಂದ್ರ ಜೈನ್, ದೀಪಚಂದ್ ಜೈನ್, ಪ್ರವೀಣ ಜೈನ್, ಗೌತಮ್ ಜೈನ್, ಮಹಾವೀರ ಜೈನ್, ಭರತ್ ಜೈನ್,ಮನೋಜ್ ಜೈನ್ ಮತ್ತು ಮುಂತಾದವರು, ಜಿಲ್ಲಾಧಿಕಾರಿ ಕಚೇರಿಯ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ವಾ.ಕ.ರ.ಸಾ.ಸಂಸ್ಥೆಯ ಕೇಂದ್ರ ಕಛೇರಿಯಲ್ಲಿ ಭಗವಾನ ಮಹಾವೀರ ಜಯಂತಿ ಆಚರಣೆ

ಗದಗ ಏಪ್ರಿಲ್ 22: ವಾ0ಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ0ಯ ಕೇಂದ್ರ ಕಛೇರಿ ಹುಬ್ಬಳ್ಳಿ0ಯಲ್ಲಿ ರವಿವಾರ ಭಗವಾನ ಮಹಾವೀರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ದೀಪ ಬೆಳಗಿಸುವುದರ ಮೂಲಕ ಜ0ಯಂತಿ0ಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾ0ರ್ಯಕ್ರಮವನ್ನು ಉದ್ದೇಶಿಸಿ ಉಗ್ರಾಣ ಮತ್ತು ಖರೀದಿ ನಿ0ಯಂತ್ರಕರಾದ ಐ ಎ ಕಂದಗಲ್ ಅವರು ಮಾತನಾಡಿ ಜೈನಧರ್ಮದ 24ನೇ ತೀರ್ಥಂಕರರಾದ ಭಗವಾನ ಮಹಾವೀರ ಅವರು ಅಹಿಂಸೆ0ಯನ್ನು ಬೋಧಿಸಿದರು. ಬದುಕಿರಿ ಮತ್ತು ಬದುಕಲು ಬೀಡಿ ಎಂಬ ತತ್ವದ ಮೂಲಕ ಸಮಾಜದಲ್ಲಿ ಸಮಾನತೆ0ಯ ಸಂದೇಶಗಳನ್ನು ನೀಡಿದ್ದಾರೆ ಎಂದು ನುಡಿದರು. ಕಾ0ರ್ಯಕ್ರಮದಲ್ಲಿ ಸಿಬ್ಬಂದಿಗಳಾದ ಅರುಣ ಮೂಶನ್ನವರ, ವಿ ಎಫ್ ಬಿಜಾಪೂರ, ರಾಜು ಮಹೇಂದ್ರಕರ, ವರ್ಷಾ ಜಾಧವ, ನಾಗರಾಜ ಹಬ್ಬು, ವಿಜ0ಯಕುಮಾರ ಕಂಬಾರ, ಶಿವು ಬೆಂಡಿಗೇರಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ವಿರೂಪಾಕ್ಷ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿ ಕಾ0ರ್ಯಕ್ರಮವನ್ನು ನಿರೂಪಿಸಿದರು.

ಪಾರದರ್ಶಕ ಆಡಳಿತಕ್ಕಾಗಿ ಬಿಜೆಪಿಗೆ ಮತ ನೀಡಿ– ಹೇಮಲತಾ ನಾಯಕ

ಕೊಪ್ಪಳ: ರಾಜ್ಯದಲ್ಲಿ ಆಡಳಿತ ಸುವ್ಯವಸ್ಥೆ ಹದಗೆಟ್ಟಿದೆ. ಶಾಂತಿ, ಸಹಭಾಳ್ವೆ, ಭಾತೃತ್ವ ಭಾವನೆ, ಸುರಕ್ಷಿತ ಅಭಿವೃದ್ಧಿ, ಪಾರದರ್ಶಕ ಆಡಳಿತಕ್ಕಾಗಿ ಬಿಜೆಪಿಗೆ ಮತ ನೀಡಿ ಎಂದು ವಿಧಾನ ಪರಿಷತ್ ಸದಸ್ಯೆ ಹೇಮಲತಾ ಹೇಳಿದರು.ಕಿನ್ನಾಳ ಗ್ರಾಮದ ಬಾಲಕಿ ಅನುಶ್ರೀ ಮನೆಗೆ ಭೇಟಿ ನೀಡಿ ಮಾತನಾಡಿದ ಅವರು, ಏಳು ವರ್ಷದ ಬಾಲಕಿ ಅನುಶ್ರೀ ಹತ್ಯೆ ದುಃಖ ತಂದಿದೆ. ಈ ಹೇಯ ಕೃತ್ಯ ಮಾಡಿದ ಪಾಪಿಗಳಿಗೆ ಶಿಕ್ಷೆಯಾಗಬೇಕು. ಅನುಶ್ರೀಗೆ ನ್ಯಾಯ ಸಿಗಬೇಕು ಎಂದು ಒತ್ತಾಯಿಸಿದರು.ರಾಜ್ಯದಲ್ಲಿ ಕೋಮುಗಲಭೆ, ಅಶಾಂತಿ ವಾತಾವರಣ ನಿರ್ಮಾಣವಾಗಿದೆ. ಕಾಂಗ್ರೆಸ್ ತುಷ್ಟಿಕರಣ ರಾಜಕಾರಣ ಮಾಡುತ್ತಿದ್ದು, ಇದರಿಂದ ರಾಜ್ಯದಲ್ಲಿ ಸಾವು–ನೋವುಗಳ ಸಂಖ್ಯೆ ಹೆಚ್ಚಾಗಿದೆ. ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ರಾಜ್ಯಾದ್ಯಂತ ಲಕ್ಷಕ್ಕೂ ಅಧಿಕ ಪ್ರಕರಣ ದಾಖಲಾಗಿದೆ ಎಂದು ಆರೋಪಿಸಿದರು.ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ.ಶರಣಪ್ಪ ಮಾತನಾಡಿ, ಆರೋಗ್ಯಕರ ಸಮಾಜಕ್ಕಾಗಿ ಶಾಂತಿ ನೆಲಸಬೇಕು. ದೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಅಧಿಕಾರಕ್ಕೆ ಬಂದ ಬಳಿಕ ದೇಶಾದ್ಯಂತ ನಕ್ಸಲರನ್ನು ಮಟ್ಟ ಹಾಕಲಾಗಿದೆ. ರೌಡಿಗಳ ಉಪಟಳ ತಡೆದು ಗಡಿಪಾರು ಮಾಡಲಾಗಿದೆ. ಶಾಂತಿ ಸುವ್ಯವಸ್ಥೆಗಾಗಿ ಮತ್ತೊಮ್ಮೆ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಅಧಿಕಾರಕ್ಕೆ ಬರಬೇಕು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ